## ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 131(120)

**ಮಾನ್ಯ ಸದಸ್ಯರ ಹೆಸರು** : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 05.03.2025

**ಉತ್ತರಿಸುವ ಸಚಿವರು** : ಮಾನ್ಯ ಕಂದಾಯ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ಗ್ರಾಮ ಆಡಳಿತ ಅಧಿಕಾರಿಗಳು ಸಾಮೂಹಿಕ ರಜೆ ಹಾಕಿ ತಮ್ಮ ಸಮಸ್ಯೆಗಳ ಪರಿಹಾರ ಹಾಗೂ ನಾನಾ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಮುಷ್ಕರ ಆರಂಭಿಸಿರುವುದರಿಂದ, ಇಡೀ ಗ್ರಾಮ ಆಡಳಿತ ವ್ಯವಸ್ಥೆ ಸ್ತಬ್ಧವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗ್ರಾಮ ಆಡಳಿತ ಅಧಿಕಾರಿಗಳು ದಿನಾಂಕ:10.02.2025 ರಿಂದ 21.02.2025ರವರೆಗೆ ಸಾಮೂಹಿಕ ಮುಷ್ಕರದಲ್ಲಿ ಭಾಗವಹಿಸಿದ್ದು, ಸದರಿ ಮುಷ್ಕರದ ಅವಧಿಯಲ್ಲಿ ಸಾರ್ವಜನಿಕರು / ರೈತರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ, ಗ್ರಾಮ ಆಡಳಿತ ಅಧಿಕಾರಿಗಳು ನಿರ್ವಹಿಸುತ್ತಿದ್ದ ಕೆಲಸಗಳನ್ನು ರಾಜಸ್ವ ನಿರೀಕ್ಷಕರುಗಳ ನಿರ್ವಹಿಸಿರುತ್ತಾರೆ. |
| ಆ) | ಬಂದಿದ್ದಲ್ಲಿ, ಈ ಹಿಂದೆ ಗ್ರಾಮ ಆಡಳಿತ ಅಧಿಕಾರಿಗಳು ಇದೇ ರೀತಿಯಲ್ಲಿ ಮುಷ್ಕರ ಹೂಡಿದ ಸಂದರ್ಭದಲ್ಲಿ ಸರ್ಕಾರ ಅವರ ಬೇಡಿಕೆಗಳ ಈಡೇರಿಕೆಗೆ ಭರವಸೆ ನೀಡಿದ್ದು, ಆ ಕುರಿತು ಇದುವರೆಗೆ ಏನು ಕ್ರಮ ಕೈಗೊಂಡಿದೆ; | ಸರ್ಕಾರದ ಆದೇಶ ಸಂಖ್ಯೆ:ಕಂಇ 155 ಬಿಎಸ್‌ಸಿ 2024, ದಿನಾಂಕ:10.12.2024ರಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ವಿವಿಧ ಬೇಡಿಕೆಗಳ ಹಾಗೂ ಸಮಸ್ಯೆಗಳ ಕುರಿತು ಪರಿಶೀಲಿಸಿ, ಸರ್ಕಾರಕ್ಕೆ ಸೂಕ್ತ ಸಲಹೆ ಹಾಗೂ ಶಿಫಾರಸ್ಸುಗಳನ್ನು ನೀಡುವಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ವಿಶೇಷ ಸಲಹಾ ಸಮಿತಿಯನ್ನು ರಚಿಸಲಾಗಿರುತ್ತದೆ.<br><br>ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳಿಗೆ ಸಂಬಂಧಿಸಿದಂತೆ ವಿಶೇಷ ಸಲಹಾ ಸಮಿತಿಯಿಂದ ವರದಿಯ ನಿರೀಕ್ಷಣೆಯಲ್ಲಿದೆ. |
| ಇ) | ಯಾವ ಕಾಲಮಿತಿಯೊಳಗೆ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆಗಳನ್ನು ಪರಿಹರಿಸುವುದರ ಜೊತೆಗೆ ಅವರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಅಗತ್ಯ ಕ್ರಮ ವಹಿಸಲಾಗುವುದು? | |

**ಸಂಖ್ಯೆ: ಕಂಇ 38 ಬಿಎಸ್‌ಸಿ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು